ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು. ದಿನಾಂಕಃ 02.08.2024.

**ಮುಖ್ಯ ವಿಚಾರಣೆಃ** ವಾದಿ ಪರ ಶ್ರೀ ಎಸ್.ಬಿ.ಪಿ. ವಕೀಲರಿಂದಃ

ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯದಿಂದಾ ಕೂಡಿದ್ದು, ಅದನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ಸಾಕ್ಷಿ ನಿಪಿ-1ರಲ್ಲಿ ತಮ್ಮ ಸಹಿ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-(ಐ) ಎಂದು ಗುರುತಿಸಲಾಗಿರುತ್ತದೆ.

**ಪಾಟೀ ಸವಾಲುಃ** ಪ್ರತಿವಾದಿ ಪರ ವಕೀಲರಿಂದಃ

(ಪ್ರತಿವಾದಿ ಗೈರು ಹಾಜರು ಕಾರಣ ಪಾಟೀ ಸವಾಲು ಏನು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.)

**ಮರು ವಿಚಾರಣೆಃ** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಆಳಂದ.**

ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು. ದಿನಾಂಕಃ 02.08.2024.

**ಮುಖ್ಯ ವಿಚಾರಣೆಃ** ವಾದಿ ಪರ ಶ್ರೀ ಎಸ್.ಬಿ.ಪಿ. ವಕೀಲರಿಂದಃ

ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯದಿಂದಾ ಕೂಡಿದ್ದು, ಅದನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ಇಂದು ನಾನು ದಾವೆಗೆ ಸಂಬಂಧಪಟ್ಟಂತೆ ಕೆಲವು ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ, ಅವುಗಳನ್ನು ನನ್ನ ಪರವಾಗಿ ಪರಿಗಣಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

ಪ್ರತಿವಾದಿ ನನಗೆ ಬರೆದುಕೊಟ್ಟ ನೋಂದಣಿ ಕ್ರಯ ಕರಾರು ಪತ್ರವನ್ನು ನಿಪಿ-1 ಎಂದು, ಪ್ರತಿವಾದಿಯ ನಾಲ್ಕು ಸಹಿಗಳನ್ನು ಕ್ರಮವಾಗಿ ನಿಪಿ-1(ಎ) ರಿಂದ ನಿಪಿ-1(ಡಿ) ಎಂದು, ಅದೇ ರೀತಿ ನನ್ನ ಸಹಿಯನ್ನು ನಿಪಿ-1(ಇ) ಎಂದು ಗುರುತಿಸಲಾಯಿತು. ನಿಪಿ-1ನ್ನು ಒಪ್ಪಿ ಒಪ್ಪಿ ಗೆ ಸಾಕ್ಷಿದಾರರು ಅಂತ 1ನೇ ಪ್ರತಿವಾದಿ ತಂದೆ ರಾಜಶೇಖರ, ತಾಯಿ ಪಲ್ಲವಿ, ತಮ್ಮ ಶಶಾಂಕ ರವರು ಸಹಿಗಳನ್ನು ಮಾಡಿದ್ದು, ಅವುಗಳನ್ನು ಕ್ರಮಾವಾಗಿ ನಿಪಿ-1(ಎಫ್) ರಿಂದ ನಿಪಿ-1(ಹೆಚ್) ಎಂದು ಗುರತಿಸಲಾಯಿತು. ಅದೇ ರೀತಿ ಸಾಕ್ಷಿದಾರರಾದ ರೇವಣಸಿದ್ದಪ್ಪ ಮತ್ತು ಡಾಃ ಬಸವರಾಜ ರವರು ಸಹಿ ಮಾಡಿದ್ದು, ಅವುಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1(ಐ) ಮತ್ತು ನಿಪಿ-1(ಜೆ) ಎಂದು ಗುರುತಿಸಲಾಯಿತು. ನಿಪಿ-1ರ ದಾಖಲೆಯನ್ನು ಸೂರ್ಯಕಾಂತ ಮಡ್ಡೆ ರವರು ತಯಾರಿಸಿರುತ್ತಾರೆ. ವಕೀಲರಿ ನೋಟೀಸ್‌ನ್ನು ನಿಪಿ-2 ಎಂದು, ಅಂಚೆ ರಶೀದಿಯನ್ನು ನಿಪಿ-3 ಎಂದು, ಅಂಚೆ ಕವರ್‌ನ್ನು ನಿಪಿ-4 ಎಂದು, ಅಂಚೆ ಸ್ವಿಕೃತಿಯನ್ನು ನಿಪಿ-5 ಎಂದು, ಎರಡು ಆರ್ ಟಿಸಿಗಳನ್ನು ಕ್ರಮವಾಗಿ ನಿಪಿ-6 ಮತ್ತು ನಿಪಿ-7 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ನನ್ನ ದಾವೆಯಲ್ಲಿ ಕೇಳಿದಂತೆ ಡಿಕ್ರಿ ಮಾಡಬೇಕೆಂದು ಮಾನ್ಯ ನ್ಯಾಯಾಲಯಕ್ಕೆ ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲುಃ** ಪ್ರತಿವಾದಿ ಪರ ವಕೀಲರಿಂದಃ

(ಪ್ರತಿವಾದಿ ಗೈರು ಹಾಜರು ಕಾರಣ ಪಾಟೀ ಸವಾಲು ಏನು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.)

**ಮರು ವಿಚಾರಣೆಃ** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಆಳಂದ.**